# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ-190, ಮಂಗಮ್ಮನಪಾಳ್ಯ ವಾರ್ಡ್ ಸಮಿತಿ ಸಭೆಯ ನ್ಯಾವಳಿಗಳು.

ಮಾನ್ಯ ಅಧ್ಯಕ್ಷರು/ನೋಡಲ್ ಅಧಿಕಾರಿ. ಸ.ಕಾ.ನಿ.ಅ. (ಹೆಚ್.ಎಸ್.ಆರ್ ಉಪವಿಭಾಗ) ರವರು ದಿನಾಂಕ: 06.04.2021 ರಂದು ಬೆಳಿಗ್ಗೆ 11.30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು 190-ಮಂಗಮ್ಮನಪಾಳ್ಯ, ವಾರ್ಡ್ ಕಛೇರಿ (ಹೆಚ್.ಎಸ್.ಆರ್ ಉಪವಿಭಾಗ) ರಲ್ಲಿ ನಡೆಸಿದ್ದ, ವಾರ್ಡ್ ಸಮಿತಿ ಸಭೆಯ ನಡುವಳಿಗಳು.

**ಉಪಸ್ಥಿತರು:**

**ಹಾಜರಿದ್ದ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ, ಕಾರ್ಯದರ್ಶಿ, ಸದ್ಯಸರುಗಳು, ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ |
|---|---|---|
| 1 | ಶ್ರೀ ಹನುಮಂತರಾಯ ಟಿ. | ಅಧ್ಯಕ್ಷರು/ ನೋಡಲ್ ಅಧಿಕಾರಿಗಳು |
| 2 | ಶ್ರೀ ಕೆ.ಎಸ್. ರಾಮೇಗೌಡ | ಕಾರ್ಯದರ್ಶಿ, ಸಹಾಯಕ ಅಭಿಯಂತರರು ವಾರ್ಡ್ ಸಂ.190 |
| 3 | ಶ್ರೀ ಉಮೇಶ್ ಎಸ್. | ಸದಸ್ಯರು |
| 4 | ಶ್ರೀ ಶಂಕರ್ ಎನ್ | ಸದಸ್ಯರು |
| 5 | ಶ್ರೀ ಗೋಪಿನಾಥ | ಸದಸ್ಯರು |
| 6 | ಶ್ರೀ ಮಹೇಶ್ ಜೆ.ಆರ್ | ಅರಣ್ಯ ವಲಯ ಅಧಿಕಾರಿಗಳು |
| 7 | ಶ್ರೀಮತಿ ಲಕ್ಷ್ಮೀ ಬಿ | ಸ.ಕಂ.ಅ ಹೆಚ್.ಎಸ್.ಆರ್ ಉಪವಿಭಾಗ |
| 8 | ಶ್ರೀ ಸಾಯಿಬಣ್ಣ | ಸ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 9 | ಶ್ರೀ ವಿಜಯಕುಮಾರ್ | ಕಿರಿಯ ಅಭಿಯಂತರರು. ಬೆಸ್ಕಾಂ |
| 10 | ಶ್ರೀ ವಿನೋದ್ ಜಿ | ಹಿರಿಯ ಆರೋಗ್ಯ ಪರಿವೀಕ್ಷಕರು |
| 11 | ಶ್ರೀ ಹೊನ್ನೂರ ಬಾಷ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 12 | ಶ್ರೀ ಸುನೀಲ್, | ಬೀದಿ ದೀಪ ನಿರ್ವಹಣೆ |
| 13 | ಶ್ರೀ ಮಹೇಶ್ ಯಾದವ್ | ಬೀದಿ ದೀಪ ನಿರ್ವಹಣೆ |
| 14 | ಶ್ರೀ ಹನುಮಂತಪ್ಪ | ತೋಟಗಾರಿಕೆ ನಿರ್ವಹಣೆ |

ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ ಕೋವಿಡ್-19 ಇರುವ ಪ್ರಯುಕ್ತ ಜನ ಸಾಂದ್ರತೆ ಕಡಿಮೆ ಮಾಡಿ ರೋಗ ಹರಡದಂತೆ ಕ್ರಮವಹಿಸಲು ಬೆಳಿಗ್ಗೆ 10.30 ರಿಂದ 11.30ರ ವರೆಗೆ ಸಾರ್ವಜನಿಕರ ಸಭೆ ಕರೆದು, ಸಾರ್ವಜನಿಕರ ಕುಂದು ಕೊರೆಗಳ ಮನವಿಗಳು/ ಅವಹಾಲುಗಳನ್ನು ಸ್ವೀಕರಿಸಲಾಯಿತು. ಹಾಗೂ ಸಭೆಯಲ್ಲಿ ಸಮಸ್ಯೆಗಳ ಬಗ್ಗೆ ಚರ್ಚಿಸಿ ಕೆಲವು ಸಾಮಾನ್ಯ ಸಮಸ್ಯೆಗಳನ್ನು ಸ್ಥಳ ಪರಿವೀಕ್ಷಣೆ ಮಾಡಿ ಕ್ರಮ ಕೈಗೊಳ್ಳಲಾಗುವುದೆಂದು ನೋಡಲ್ ಅಧಿಕಾರಿಗಳು ಹಾಜರಿದ್ದ ಸಾರ್ವಜನಿಕರಿಗೆ ತಿಳಿಸಿದರು. ಮುಂದುವರೆದಂತೆ 11.30 ರಿಂದ ವಾರ್ಡ್ ಸದಸ್ಯರ ಮತ್ತು ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳು ಸ್ವಾಗತಾ ಕೋರಿ ಸಭೆಯನ್ನು ಮುಂದುವರೆಸಿದರು.



Scanned with Car

| ಕ್ರ ಸಂ | ಇಲಾಖೆ | ವಿಷಯ |
|---|---|---|
| 1 | ಘನತ್ಯಾಜ್ಯ (ಆರೋಗ್ಯ) ಇಲಾಖೆ | • ಮಾಂಸದ ತ್ಯಾಜ್ಯವನ್ನು ವಿಲೇವಾರಿ ಮಾಡಲು (ಮೀನು ತ್ಯಾಜ್ಯ) ತೆಗೆದುಕೊಳ್ಳುವರಿಗೆ ಮಾಂಸದ ತ್ಯಾಜ್ಯದ ವಿಲೇವಾರಿ ಮಾಡಲು ವಹಿಸಲಾಗಿದೆ ಎಂದು ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ.<br>• ಹಿಂದಿನ ಸಭೆಯಲ್ಲಿ ತಿಳಿಸಿರುವ ವಿಷಯಗಳ ಬಗ್ಗೆ ಪ್ರಸ್ತಾಪಿಸಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಫಾಸ್ಟ್ ಫುಡ್/ ಹೋಟೆಲ್ ಮತ್ತು ಬಾರ್ ರೆಸ್ಟೋರೆಂಟ್‌ನಲ್ಲಿ ಎಣ್ಣೆಯಲ್ಲಿ ಕರೆದ ಪದಾರ್ಥವನ್ನು ತಯಾರಿಸುವ ಬಗ್ಗೆ (F.S.O) Food Safety Officer ರವರ ಗಮನಕ್ಕೆ ತಂದು, ಬೀದಿ ಬದಿ ವ್ಯಾಪಾರಿಗಳ, ಹೋಟೆಲ್ &ರೆಸ್ಟೋರೆಂಟ್‌ಗಳನ್ನು ಪರಿಶೀಲಿಸಿ ನಿಯಂತ್ರಿಸಲು ಸಂಬಂಧಪಟ್ಟ ಅಧಿಕಾರಿ ರವರಿಗೆ ತಿಳಿಸಲಾಗಿ ಕ್ರಮ ವಹಿಸಲಾಗುವೆಂದು ತಿಳಿಸಿರುತ್ತಾರೆ.<br>• ವಾರ್ಡ್ ವ್ಯಾಪ್ತಿಯಲ್ಲಿ ಸೊಳ್ಳೆ ಔಷದಿ ಸಿಂಪಡಿಸಲು ವಾರ್ಡ್ ಸದಸ್ಯರು ಕೋರಿರುತ್ತಾರೆ.<br>• ಕೋವಿಡ್-19 ಸಾಂಕ್ರಾಮಿಕ ರೋಗವು 2ನೇ ಅಲೆಯು ಹೆಚ್ಚಾಗುತ್ತಿದ್ದು, ಕಂಟೈನ್ಮೆಂಟ್ ಜೋನ್‌ಗಳಲ್ಲಿ ಔಷದಿ ಸಿಂಪಡಿಸಲು ವಾರ್ಡ್ ಸದಸ್ಯರು ಕೋರಿರುತ್ತಾರೆ<br>ಈ ಬಗ್ಗೆ ಕ್ರಮ ವಹಿಸಲು ಅಧ್ಯಕ್ಷರು/ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.<br>**ಕ್ರಮ : ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು,** |
| 2 | ಬಿ.ಡಬ್ಲ್ಯೂ.ಎಸ್.ಎಸ್.ಬಿ | • ಹಿಂದಿನ ಸಭೆಯಲ್ಲಿ ತಿಳಿಸಿರುವ ವಿಷಯಗಳ ಬಗ್ಗೆ ಪ್ರಸ್ತಾಪಿಸಲಾಗಿದ್ದು, ವಾರ್ಡ್ ವ್ಯಾಪ್ತಿಯ ಇಂದಿರಾ ಕ್ಯಾಂಟೀನ್ ರಸ್ತೆಯು ಡಾಂಬರೀಕರಗೊಳಿಸಲಾಗಿದೆ ಎಂದು ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಸಭೆಯಲ್ಲಿ ತಿಳಿಸಿರುತ್ತಾರೆ.<br>• ಹಿಂದಿನ ಸಭೆಯಲ್ಲಿ ತಿಳಿಸಿರುವ ವಿಷಯಗಳ ಬಗ್ಗೆ ಪ್ರಸ್ತಾಪಿಸಲಾಗಿದ್ದು ಮಂಗಮ್ಮನಪಾಳ್ಯ ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ವ್ಯವಸ್ಥೆಯನ್ನು ವಾರಕ್ಕೆ ಎರಡು ಬಾರಿ/ ದಿನಕ್ಕೆ 8 ಗಂಟೆ ಒದಗಿಸಲಾಗುತ್ತಿದ್ದು, ರಾತ್ರಿ ವೇಳೆಯಲ್ಲಿ ಕುಡಿಯುವ ನೀರನ್ನು ಬಿಡಲಾಗುತ್ತಿದ್ದು, ಇದರಿಂದ ರಾತ್ರಿ ವೇಳೆಯಲ್ಲಿ ಸಾರ್ವಜನಿಕರ ಗಮನಕ್ಕೆ ಬಾರದೆ ನೀರು **ವೇಸ್ಟ್** ಆಗುತ್ತಿದೆ ಎಂದು ಸಭೆಯ ಸದಸ್ಯರು ಕೋರಿರುತ್ತಾರೆ.<br>ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿರುವ ವಿಷಯಗಳ ಬಗ್ಗೆ ಚರ್ಚಿಸಿರುವಂತೆ ಕುಡಿಯುವ ನೀರಿನ ಮೀಟರ್ ಅಳವಡಿಸಿಕೊಳ್ಳದೆ ಅನಧಿಕೃತವಾಗಿ ನೀರಿನ ಸಂಪರ್ಕವನ್ನು ಕಲ್ಪಿಸಿಕೊಂಡಿರುವ ಒಟ್ಟು 500 ಮನೆಗಳಿಗೆ ನೋಟಿಸ್ ಜಾರಿ ಮಾಡುವಂತೆ ಬಿ.ಎಂ.ಟಿ.ಎಫ್ ಸಂಸ್ಥೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಪತ್ರ ಬರೆಯಲಾಗಿದೆ. ದಿನಕ್ಕೆ 10-15 ಮನೆಗಳನ್ನು ಬಿ.ಎಂ.ಟಿ.ಎಫ್ ರವರು ಪತ್ತೆ ಹಚ್ಚಿ ನೋಟಿಸ್ ಜಾರಿಗೊಳಿಸಲಾಗುತ್ತಿದೆ, ಮುಂದಿನ ಸಭೆಯಲ್ಲಿ 200 ಮನೆಗಳ ನೀರಿನ ಸಂಪರ್ಕವನ್ನು ಕಡಿತಗೊಳಿಸಿರುವ ಪಟ್ಟಿಯನ್ನು ನೀಡಲಾಗುವುದೆಂದು ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ತಿಳಿಸಿರುತ್ತಾರೆ. ಈ ಬಗ್ಗೆ ಕ್ರಮ ವಹಿಸಲು ಅಧ್ಯಕ್ಷರು/ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.<br>**ಕ್ರಮ : ಸ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ** |



Scanned with Car

| | | |
|---|---|---|
| 3 | ಕಂದಾಯ ವಿಭಾಗ | • ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿರುವ ವಿಷಯಗಳ ಬಗ್ಗೆ ಚರ್ಚಿಸಿರುವಂತೆ ವಾರ್ಡ್ ವ್ಯಾಪ್ತಿಯ ಮಂಗಮ್ಮನಪಾಳ್ಯ ಕೆರೆಯ ಸರ್ವೆ ಸಂಖ್ಯೆ: 19 ರಲ್ಲಿ 7 ಎಕರೆ 29 ಗುಂಟೆ ಜಾಗವಿದ್ದು, ಕೆರೆಯ ಜಾಗದಲ್ಲಿ ಅನಧಿಕೃತವಾಗಿ ಕಟ್ಟಡ ನಿರ್ಮಿಸಿದ್ದು, ಈ ನಿವೇಶನದ ಖಾತಾ, ಅಭಿವೃದ್ಧಿ ಶುಲ್ಕ, ಡಿ.ಸಿ. ಕನ್ವರ್ಷನ್ ಇತ್ಯಾದಿ ದಾಖಲಾತಿಗಳನ್ನು ಪರಿಶೀಲಿಸಲು ಕ್ರಮ ವಹಿಸಲಾಗುತ್ತಿದೆ ಎಂದು ಸಹಾಯಕ ಕಂದಾಯ ಅಧಿಕಾರಿ ರವರು ಸಭೆಯಲ್ಲಿ ತಿಳಿಸಿರುತ್ತಾರೆ.<br>ವಾರ್ಡ್ ವ್ಯಾಪ್ತಿಯ ಬಂಡೇಪಾಳ್ಯ ಸರ್ವೆ ನಂ. 47 ರಲ್ಲಿ 2 ಎಕರೆ 18 ಗುಂಟೆ ಜಾಗವನ್ನು ಖಾಸಗಿ ವ್ಯಕ್ತಿಗಳಿಂದ ಅಕ್ರಮಿಸಿಕೊಂಡಿದ್ದು, ಎಲ್ಲಾ ಸೂಕ್ತ ದಾಖಲಾತಿಗಳನ್ನು ಪರಿಶೀಲಿಸಲು ಕ್ರಮ ವಹಿಸಲಾಗುತ್ತಿದೆ ಎಂದು ಸಹ ಕಂದಾಯ ಅಧಿಕಾರಿಗಳು ಸಭೆಯಲ್ಲಿ ತಿಳಿಸಿರುತ್ತಾರೆ.<br>ಈ ಬಗ್ಗೆ ಕ್ರಮ ವಹಿಸಲು ಅಧ್ಯಕ್ಷರು/ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.<br>**ಕ್ರಮ : ಸ.ಕ.ಅ. ಹೆಚ್.ಎಸ್.ಆರ್ ಉಪವಿಭಾಗ** |
| 5 | ವಿದ್ಯುತ್ ವಿಭಾಗ | • ವಾರ್ಡ್ ವ್ಯಾಪ್ತಿಯಲ್ಲಿ ಹಾಲಿ ಇರುವ ಬೀದಿ ದೀಪಗಳನ್ನು ತೆರವುಗೊಳಿಸಿ ಹೊಸದಾಗಿ ಎಲ್.ಇ.ಡಿ. ದೀಪಗಳನ್ನು ಮತ್ತು ಟೈಮರ್‌ಗಳನ್ನು ಅಳವಡಿಸುವಂತೆ ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಕ್ರಮ ವಹಿಸುವಂತೆ ಅಧ್ಯಕ್ಷರು ಸೂಚಿಸಿರುತ್ತಾರೆ.<br>• ಹೊಸಪಾಳ್ಯ ವಿದ್ಯುತ್ ಚಿತಾಗಾರದಲ್ಲಿ, ಚಿಮಣಿ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲ, ಅದರಿಂದ ದುರ್ವಾಸನೆ ಬರುತ್ತಿದೆ ಎಂದು ಸಭೆಯಲ್ಲಿ ಸದಸ್ಯರು ದುರಸ್ಥಿ ಪಡಿಸುವಂತೆ ಕೋರಿರುತ್ತಾರೆ.<br>ಈ ಬಗ್ಗೆ ಕ್ರಮ ವಹಿಸಲು ಅಧ್ಯಕ್ಷರು/ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.<br>**ಕ್ರಮ : ಸಹಾಯಕ ಅಭಿಯಂತರರು, ವಿದ್ಯುತ್ ವಿಭಾಗ** |
| 6 | ಬೆಸ್ಕಾಂ | ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿರುವ ವಿಷಯಗಳ ಬಗ್ಗೆ ಚರ್ಚಿಸಿರುವಂತೆ ನಂಜುಡಪ್ಪ ಬಡಾವಣೆಯ 4ನೇ ಮುಖ್ಯ ರಸ್ತೆಯಲ್ಲಿ ರಸ್ತೆಗೆ ಅಡ್ಡಲಾಗಿರುವ ಕಂಬಗಳನ್ನು ತೆರವುಗೊಳಿಸಲಾಗಿದೆ ಎಂದು ಸಹಾಯಕ ಅಭಿಯಂತರರು, ಬೆಸ್ಕಾಂ ರವರು ಸಭೆಯಲ್ಲಿ ತಿಳಿಸಿರುತ್ತಾರೆ.<br>ಈ ಬಗ್ಗೆ ಕ್ರಮ ವಹಿಸಲು ಅಧ್ಯಕ್ಷರು/ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.<br>**.ಕ್ರಮ : ಸ.ಅ. ಬೆಸ್ಕಾಂ** |
| 7 | ಅರಣ್ಯ ಇಲಾಖೆ | ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ಮನೆ ಮುಂಭಾಗ ಮರ-ಗಿಡ ಇಲ್ಲವೆಂದು ಹಾಗೂ ಹೊಸಪಾಳ್ಯ ವಿದ್ಯುತ್ ಚಿತಾಗಾರದ ಸುತ್ತಮುತ್ತಲಿನಲ್ಲಿ ಮರ-ಗಿಡಗಳು ಇಲ್ಲವೆಂದು ವಾರ್ಡ್ ಸಭೆಯ ಗಮನಕ್ಕೆ ಸದಸ್ಯರು ತಂದಿರುತ್ತಾರೆ, ಈ ಬಗ್ಗೆ ಅರಣ್ಯಾಧಿಕಾರಿಗಳು ಈಗ ಬೇಸಿಗೆ ಕಾಲ ಸಮಿಪಿಸುತ್ತಿರುವುದಾಗಿ ಜೂನ್/ಜುಲೈ ಮಾಹೇಯಲ್ಲಿ ಗಿಡಗಳನ್ನು ನೆಡುವುದಾಗಿ ತಿಳಿಸಿರುತ್ತಾರೆ. ಈ ಬಗ್ಗೆ ಕ್ರಮ ವಹಿಸಲು ಅಧ್ಯಕ್ಷರು/ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.<br>**ಕ್ರಮ : ವಲಯ ಅರಣ್ಯಾಧಿಕಾರಿಗಳು** |
| 7 | ಕಾಮಗಾರಿ | • ವಾರ್ಡ್ ವ್ಯಾಪ್ತಿಯ ಬಂಡೇಪಾಳ್ಯ ಗ್ರಾಮದಲ್ಲಿರುವ ಕ್ವಾರಿಗೆ ನಿರಂತರವಾಗಿ ಮಣ್ಣನ್ನು ಮತ್ತು ಡೆಬ್ರಿಸ್ ಸುರಿಯಲಾಗುತ್ತಿದೆ ಎಂದು ಸದಸ್ಯರು ಸಭೆಯ ಗಮನಕ್ಕೆ ತಂದಿರುತ್ತಾರೆ.<br>• ವಾರ್ಡ್ ವ್ಯಾಪ್ತಿಯ ಸೋಮಸುಂದರಪಾಳ್ಯ, ಚಿನ್ಮಯಿ ಶಾಲೆಯ ಹಿಂಭಾಗ ಹಾಳಾಗಿರುವ ರಸ್ತೆಗೆ, ಕಾಂಕ್ರೀಟ್ ರಸ್ತೆ ಮಾಡಲು ಕ್ರಿಯಾಯೋಜನೆಯಲ್ಲಿ ಸೇರಿಸಿ ಕ್ರಮ ಕೈಗೊಳ್ಳಲಾಗುವುದೆಂದು ಸಹಾಯಕ ಅಭಿಯಂತರರು ತಿಳಿಸಿರುತ್ತಾರೆ.<br>• ಹೊಸಪಾಳ್ಯ ಅಡ್ಡ ರಸ್ತೆಯಲ್ಲಿ ಚರಂಡಿ ಮತ್ತು ಕಲ್ವರ್ಟ್ ನಿರ್ಮಾಣ ಮಾಡಲು |

Scanned with Car

| | | |
|---|---|---|
| | | ಕ್ರಿಯಾಯೋಜನೆಯಲ್ಲಿ ಸೇರಿಸಿ ಕ್ರಮ ಕೈಗೊಳ್ಳಲಾಗುವುದೆಂದು ಸಹಾಯಕ ಅಭಿಯಂತರರು ತಿಳಿಸಿರುತ್ತಾರೆ.<br>• ಹೊಸಪಾಳ್ಯ ಬಸ್ ನಿಲ್ದಾಣದಲ್ಲಿ ಸಾರ್ವಜನಿಕ ಶೌಚಾಲಯವನ್ನು ನಿರ್ಮಾಣ ಮಾಡುವಂತೆ ಯೋಜನೆ ವಿಭಾಗ ಸಹಾಯಕ ಕಾರ್ಯಪಾಲಕ ಅಭಿಯಂತರರ ರವರಿಗೆ ಗಮನಕ್ಕೆ ತರಲಾಗಿದೆ ಎಂದು ಸಹಾಯಕ ಅಭಿಯಂತರರು ತಿಳಿಸಿರುತ್ತಾರೆ.<br>ಈ ಬಗ್ಗೆ ಕ್ರಮ ವಹಿಸಲು ಅಧ್ಯಕ್ಷರು/ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.<br>**ಕ್ರಮ: ಸಹಾಯಕ ಅಭಿಯಂತರರು, ವಾರ್ಡ್ ನಂ. 190** |

ಈ ಮೇಲಿನ ಎಲ್ಲಾ ವಿಷಯಗಳಿಗೆ ಸಂಬಂಧಪಟ್ಟಂತೆ ಕೂಲಂಕುಷವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿದ್ದ ಎಲ್ಲಾ ಅಧಿಕಾರಿಗಳಿಗೆ ಸೂಚಿಸಿ, ಸಭೆಯನ್ನು ವಂದಾನಾರ್ಪಣೆಯೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ವಾರ್ಡ್ ನಂ. 190

ಅಧ್ಯಕ್ಷರು/ ನೋಡಲ್ ಅಧಿಕಾರಿಗಳು
ವಾರ್ಡ್ ನಂ. 190

**ಪ್ರತಿಯನ್ನು:-**

1. ಮಾನ್ಯ ಆಡಳಿತಗಾರರು, ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ
2. ವಿಶೇಷ ಆಯುಕ್ತರು, (ಆಡಳಿತ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮನ್ಯ ವಲಯ ಆಯುಕ್ತರು, ಬೊಮ್ಮನಹಳ್ಳಿ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ
4. ಜಂಟಿ ಆಯುಕ್ತರು (ಬೊಮ್ಮನಹಳ್ಳಿ ವಲಯ) ರವರ ಅವಗಾಹನೆಗಾಗಿ ಸಲ್ಲಿಸಿದೆ
5. ವಾರ್ಡ್ ಸಮಿತಿಯ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.
6. ಕಛೇರಿ ಪ್ರತಿ.

Scanned with Car